# ಕರ್ನಾಟಕ ವಿಧಾನ ಪರಿಷತ್

ಶ್ರೀ. ಸುನಿಲ್ ಸುಬ್ರಮಣಿ ಎಂ.ಪಿ. ಮಾನ್ಯ ವಿಧಾನ ಪರಿಷತ್ತಿನ ಸದಸ್ಯರು ನಿಯಮ 72ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಯಲ್ಲಿ 'ಕೊಡಗು ಜಿಲ್ಲೆಯಲ್ಲಿ ಬೆಟ್ಟಗುಡ್ಡಗಳಿಂದ ಅವೃತ್ತವಾಗಿರುವ ರಾಜ್ಯದಲ್ಲಿನ ಇತರೆ ಬೇರೆ ಪ್ರದೇಶಗಳಲ್ಲಿನ ಭೂ ಪ್ರದೇಶವನ್ನು ಈ ಜಿಲ್ಲೆಯು ಹೊಂದಿಲ್ಲ. ಪ್ರತಿ ವರ್ಷವು ಮಳೆಯ ಕಾರಣದಿಂದ ರಸ್ತೆಗಳು ಗುಡ್ಡ ಕುಸಿದಂತಹ ಪ್ರಸಂಗಗಳು ನಡೆಯುತ್ತಲೆ ಇರುವುದು ಸರ್ಕಾರದ ಗಮನಕ್ಕೆ ಬಂಧಿರುವ ವಿಷಯವೇ ಆಗಿರುತ್ತದೆ. ಆದಕಾರಣ ಇಲ್ಲಿನ ಲೋಕೋಪಯೋಗಿ ರಸ್ತೆಗಳನ್ನು ಮಾಡುವ ಸಂದರ್ಭದಲ್ಲಿ ರಾಜ್ಯದ ಇತರೆಡೆಗಳಲ್ಲಿ ಮಾಡುವಂತೆ ರಸ್ತೆ ನಿರ್ಮಾಣ ಕಾರ್ಯಗಳನ್ನು ಮಾಡದೆ ಈಶಾನ್ಯ ರಾಜ್ಯಗಳ ಬೆಟ್ಟಗುಡ್ಡ ಪ್ರದೇಶಗಳಲ್ಲಿ ಬಳಸುವ ಉತ್ತಮ ತಂತ್ರಜ್ಞಾನಗಳನ್ನು ಬಳಸಿಕೊಂಡು ಇಲ್ಲಿನ ರಸ್ತೆಗಳ ನಿರ್ಮಾಣ ಕಾರ್ಯಗಳನ್ನು ಮಾಡಿದ್ದಲ್ಲಿ ಜಿಲ್ಲೆಯಲ್ಲಿನ ರಸ್ತೆಗಳನ್ನು ಸುಮಾರು ವರ್ಷಗಳ ಕಾಲ ಸುಸ್ಥಿತಿಯಲ್ಲಿಡಬಹುದಾಗಿರುತ್ತದೆ.

ಈ ವಿಷಯದ ಕುರಿತಾಗಿ ಇಲಾಖೆಯ ಅಧಿಕಾರಿಗಳ ಸಮಿತಿಯನ್ನು ರಚಿಸಿ ಸೂಕ್ತ ಪರಿಶೀಲನೆಯನ್ನು ಮಾಡಿ ಗುಣಮಟ್ಟದ ರಸ್ತೆಗಳನ್ನು ನಿರ್ಮಿಸಲು ಸೂಕ್ತ ಕ್ರಮಗಳನ್ನು ತೆಗೆದುಕೊಳ್ಳುವ ಬಗ್ಗೆ' ಈ ಗಮನ ಸೆಳೆಯುವ ಸೂಚನೆಗೆ ಮಾನ್ಯ ಉಪ ಮುಖ್ಯಮಂತ್ರಿಗಳು, ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಇಲಾಖೆ ಇವರ ಹೇಳಿಕೆ.

ಪ್ರಸ್ತುತ ಲೋಕೋಪಯೋಗಿ ಇಲಾಖೆಯಲ್ಲಿ, ಇಂಡಿಯನ್ ರೋಡ್ ಕಾಂಗ್ರೆಸ್ (IRC) ನಿಯಮಗಳ ಅನ್ವಯ ಸ್ಥಳೀಯ ಅಗತ್ಯತೆಗೆ ಅನುಗುಣವಾಗಿ ರಸ್ತೆಗಳ ದುರಸ್ಥಿ ಹಾಗೂ ನಿರ್ಮಾಣ ಕಾರ್ಯಗಳನ್ನು ಕೈಗೊಳ್ಳಲಾಗುತ್ತಿದೆ. ಕೊಡಗು ಜಿಲ್ಲೆಯಲ್ಲಿನ ಅತಿ ಹೆಚ್ಚು ಮಳೆ ಪ್ರಮಾಣ, ಮಣ್ಣಿನ ಗುಣಮಟ್ಟ, ವಾಹನಗಳ ಓಡಾಟದ ಒತ್ತಡಗಳನ್ನು ಪರಿಗಣಿಸಿ, ಹಾಲಿ ರಸ್ತೆ ನಿರ್ಮಾಣಗಳನ್ನು ಕೈಗೊಳ್ಳಲಾಗುತ್ತಿದೆ. ಹೆಚ್ಚುವರಿಯಾಗಿ ಮಾನ್ಯ ವಿಧಾನ ಸಭಾ ಸದಸ್ಯರವರ ಅಭಿಪ್ರಾಯದಂತೆ ಈಶಾನ್ಯ ರಾಜ್ಯಗಳಲ್ಲಿ ಬಳಸುವ ತಂತ್ರಜ್ಞಾನವನ್ನು ಪಡೆದು ಪರಿಶೀಲಿಸಿ, ಕೊಡಗು ಜಿಲ್ಲೆಯಲ್ಲಿನ ರಸ್ತೆಗಳ ನಿರ್ಮಾಣದಲ್ಲಿ ಬಳಸುವ ಬಗ್ಗೆ ಪರಿಶೀಲಿಸಲಾಗುವುದು.

ಲೋಇ 61 ಸಿಕ್ಯೂಎನ್ 2020(ಇ)

(ಗೋವಿಂದ ಎಂ. ಕಾರಜೋಳ)
ಉಪ ಮುಖ್ಯಮಂತ್ರಿಗಳು, ಲೋಕೋಪಯೋಗಿ
ಮತ್ತು ಸಮಾಜ ಕಲ್ಯಾಣ ಇಲಾಖೆ